ಜನಮನದ ದನಿ

# ಪ್ರಜೋದಯ

ಸಂಪಾದಕ : ಜೆ.ಆರ್. ಕೆಂಚೇಗೌಡ



ಇಂಡಿಯನ್ ಪ್ರೀಮಿಯರ್ ಲೀಗ್ (ಐಪಿಎಲ್) ಟೂರ್ನಿಯ 16ನೇ ಪಂದ್ಯದಲ್ಲಿ ರಾಯಲ್ ಚಾಲೆಂಜರ್ಸ್ ಬೆಂಗಳೂರು(ಆರ್‌ಸಿಬಿ) ವಿರುದ್ಧ ಟಾಸ್ ಗೆದ್ದಿರುವ ರಾಜಸ್ಥಾನ ರಾಯಲ್ಸ್ ತಂಡವು ಮೊದಲು ಫೀಲ್ಡಿಂಗ್ ಆಯ್ದುಕೊಂಡಿದೆ.

11 ಏಪ್ರಿಲ್ 2026 ಶನಿವಾರ ಬೆಲೆ ₹ 2.00 ಸಂಪುಟ : 20 ಸಂಚಿಕೆ : 32 | ಪುಟ-4 | ಹಾಸನ | E-mail : prajodayahsn@gmail.com | RNI NO: KARKAN/2007/22629



ರಾಜಕೀಯ ಮೀಸಲಾತಿಯಿಂದ ಮಹಿಳೆಯರ ಸಬಲೀಕರಣ » 2



ಪಶ್ಚಿಮ ಬಂಗಾಳದಲ್ಲಿ ಬಿಜೆಪಿ ಅಧಿಕಾರಕ್ಕೆ ಬಂದರೆ ಮಹಿಳೆಯರಿಗೆ ಸರ್ಕಾರಿ ಬಸ್‌ಗಳಲ್ಲಿ ಉಚಿತ ಪ್ರಯಾಣ



ಅನಂತ್ ಅಂಬಾನಿ ಸ್ಥಾಪಿಸಿದ ಜಾಗತಿಕ ವನ್ಯಜೀವಿ ಸಂರಕ್ಷಣಾ ಸಂಸ್ಥೆಯಾದ ವಂತರಾ ಗುಜರಾತ್‌ನ ಜಾಮ್‌ನಗರದಲ್ಲಿ ವನ್ಯಜೀವಿ ವಿಶ್ವವಿದ್ಯಾಲಯ ಪ್ರಾರಂಭಿಸುವುದಾಗಿ ಘೋಷಿಸಿದೆ.

# ಜನ ಸ್ಪಂದನ ಸಭೆಯಲ್ಲಿ 1,610 ಅರ್ಜಿ ಸಲ್ಲಿಕೆ

## ಸಮಸ್ಯೆ ಆಲಿಸಿ ಪರಿಹಾರಕ್ಕೆ ನಿರ್ದೇಶನ ನೀಡಿದ ಸಚಿವ ಕೃಷ್ಣಬೈರೇಗೌಡ

• ಪ್ರಜೋದಯ ವರದಿ

**ಬೇಲೂರು :** ಹಕ್ಕು ಪತ್ರ, ಖಾತೆ ಬದಲಾವಣೆ, ಒತ್ತುವರಿ ತೆರವು, ಇಂಡೀಕರಣ, ಪೋಡಿ ದುರಸ್ತು, ಇ-ಸ್ವತ್ತು, ವಿದ್ಯುತ್ ಲೈನ್ ಸ್ಥಳಾಂತರ, ಅಂಬೇಡ್ಕರ್ ಭವನದ ಜಾಗ ಒತ್ತುವರಿ, ಅಂಗನವಾಡಿ ಕಟ್ಟಡ ರಿಪೇರಿ, ಜಮೀನಿಗೆ ದಾರಿ ಸಮಸ್ಯೆ ಸೇರಿ ಹಲವು ಸಮಸ್ಯೆಗಳ ಕುರಿತು ಜನಸ್ಪಂದನ ಸಭೆಯಲ್ಲಿ ಒಟ್ಟು 1,610 ಅರ್ಜಿಗಳು ಸಲ್ಲಿಕೆಯಾದವು.

ಜಿಲ್ಲಾ ಉಸ್ತುವಾರಿ ಸಚಿವ ಕೃಷ್ಣಬೈರೇಗೌಡ ಅವರ ಅಧ್ಯಕ್ಷತೆಯಲ್ಲಿ ಶುಕ್ರವಾರ ತಾಲ್ಲೂಕು ಕಚೇರಿ ಆವರಣದಲ್ಲಿ ನಡೆದ ಜನಸ್ಪಂದನ ಸಭೆಯಲ್ಲಿ ಬೆಳಗ್ಗೆಯಿಂದ ಸಂಜೆವರೆಗೂ ಸಾರ್ವಜನಿಕರ ಸಮಸ್ಯೆ ಆಲಿಸಿ, ಕೈಗೊಳ್ಳಬೇಕಾದ ಕ್ರಮಗಳ ಬಗ್ಗೆ ಅಧಿಕಾರಿಗಳಿಗೆ ಸೂಚಿಸಿದರು.

ಸರ್ಕಾರಿ ಕೆಲಸದ ನಿಮಿತ್ತ ಸಾರ್ವಜನಿಕರು ನೇರವಾಗಿ ಸಂಬಂಧಪಟ್ಟ ಮಂತ್ರಿಗಳು ಮತ್ತು ಅಧಿಕಾರಿಗಳನ್ನು ಭೇಟಿಯಾಗಬೇಕೇ ಹೊರತು ಯಾವ ಕಾರಣಕ್ಕೂ ಮಧ್ಯವರ್ತಿಗಳು ಇಲ್ಲವೇ ಪುಡಾರಿಗಳೊಂದಿಗೆ ಬರಬಾರದು. ಈ ಹಿಂದೆ ಹಾಸನದ ಜನ ಸ್ಪಂದನ ಸಭೆಯಲ್ಲಿ 8,60, ಚನ್ನರಾಯಪಟ್ಟಣದಲ್ಲಿ 1,069, ಸಕಲೇಶಪುರದಲ್ಲಿ 964 ಅರ್ಜಿಗಳು ಸೇರಿ ಒಟ್ಟು 2893 ಅರ್ಜಿಗಳಲ್ಲಿ 56 ಮಾತ್ರ ವಿಲೇವಾರಿಗೆ ಬಾಕಿ ಇವೆ. ಈಗಾಗಲೇ ವಿಲೇವಾರಿಯಾದ ಅರ್ಜಿಗಳನ್ನು ಮತ್ತೊಮ್ಮೆ



ಪರಿಶೀಲಿಸಿ ಸಮರ್ಪಕವಾಗಿ ವಿಲೇವಾರಿ ಮಾಡಲು ಅಧಿಕಾರಿಗಳಿಗೆ ತಿಳಿಸಲಾಗಿದೆ. ಜಿಲ್ಲೆಯಲ್ಲಿ ಜಮೀನು ಮಂಜೂರಾಗಿ ಪೋಡಿಯಾಗದೆ ಉಳಿದ 20,000 ಪೋಡಿ ಮಾಡುವ ಕೆಲಸ ನಡೆಯುತ್ತಿದೆ. ಇದರಿಂದ 28 ಸಾವಿರ ರೈತರಿಗೆ ನೆರವಾಗಲಿದೆ ಎಂದು ತಿಳಿಸಿದರು.

ಜಿಲ್ಲೆಯಲ್ಲಿ ಕಳೆದ ಆರು ತಿಂಗಳಿನಿಂದ 730 ವಸತಿ ಪ್ರದೇಶಗಳನ್ನು ಗುರುತಿಸಲಾಗಿದೆ. ಜನಗಣತಿ ಕಾರ್ಯ 2027ರ ಜೂನ್ ತಿಂಗಳಲ್ಲಿ ಪೂರ್ಣಗೊಂಡ ನಂತರ ಹಕ್ಕು ಪತ್ರ ನೀಡಲಾಗುವುದು. ಜಿಲ್ಲಾ ಮಟ್ಟದ ಜನಸ್ಪಂದನ ಕಾರ್ಯಕ್ರಮವನ್ನು ತಾಲ್ಲೂಕು ಮಟ್ಟದಲ್ಲಿ ಆಯೋಜಿಸುವ ಮೂಲಕ ಜನರ ಸಮಸ್ಯೆಗಳನ್ನು ಆಲಿಸಿ ಪರಿಹಾರ ಕಂಡುಕೊಳ್ಳುವ ಮೂಲಕ ಆಡಳಿತದ ವ್ಯವಸ್ಥೆಯನ್ನು ಬಲಪಡಿಸುವ ಕೆಲಸ ನಡೆಯುತ್ತಿದೆ ಎಂದು ಹೇಳಿದರು.

ಸಂಸದ ಶ್ರೇಯಸ್ ಪಟೇಲ್, ಶಾಸಕ ಹೆಚ್.ಕೆ.ಸುರೇಶ್, ಜಿಲ್ಲಾಧಿಕಾರಿ ಕೆ.ಎಸ್.ಲತಾಕುಮಾರಿ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಶುಭಾನ್ವಿತ, ಉಪ ಅರಣ್ಯ ಸಂರಕ್ಷಣಾಧಿಕಾರಿ ಸೌರಭ್ ಕುಮಾರ್, ಗ್ಯಾರಂಟಿ ಯೋಜನೆಯ ತಾಲ್ಲೂಕು ಅಧ್ಯಕ್ಷ ಆನಂದ ಮೂರ್ತಿ, ನಗರ ಸ್ಥಳೀಯ ಯೋಜನಾ ಪ್ರಾಧಿಕಾರದ ಅಧ್ಯಕ್ಷ ಸೈಯದ್ ತೌಫಿಕ್ ಅಹಮದ್, ಪುರಸಭೆ ಪ್ರಭಾರಿ ಅಧ್ಯಕ್ಷೆ ಉಷಾ ಸತೀಶ್ ಮುಂತಾದವರಿದ್ದರು.

> ಕಾಟಾಚಾರಕ್ಕೆ ಅರ್ಜಿ ವಿಲೇವಾರಿ ಮಾಡದೆ ನೈಜತೆಯನ್ನು ಅರಿತು ಪರಿಶೀಲನೆ ನಡೆಸಿ ವಿಲೇವಾರಿಗೆ ಕ್ರಮ ಕೈಗೊಳ್ಳಬೇಕು. ಸಾರ್ವಜನಿಕರ ಸಮಸ್ಯೆಗಳನ್ನು ಕಾನೂನು ಚೌಕಟ್ಟಿನಲ್ಲಿ ಬಗೆಹರಿಸಲು ಅಧಿಕಾರಿಗಳು ಪ್ರಾಮಾಣಿಕ ಪ್ರಯತ್ನ ಮಾಡಬೇಕು.
>
> -ಕೃಷ್ಣಬೈರೇಗೌಡ, ಜಿಲ್ಲಾ ಉಸ್ತುವಾರಿ ಸಚಿವ

> ಬೇಲೂರು ತಾಲ್ಲೂಕು ಮಲೆನಾಡು, ಅರೆಮಲೆನಾಡು, ಬಯಲು ಸೀಮೆ ಪ್ರದೇಶವಾಗಿದ್ದು, ಸಮಸ್ಯೆಗಳು ಸಾವಿರಾರು ಇವೆ. ಎಲ್ಲಾ ಇಲಾಖೆಗಳಲ್ಲಿ ಕಂದಾಯ ಇಲಾಖೆ ತಾಯಿ ಸ್ಥಾನದಲ್ಲಿದೆ. ಇಲ್ಲಿನ ಸಮಸ್ಯೆಗಳನ್ನು ಸಚಿವರು ಆದಷ್ಟು ಬಗೆಹರಿಸುವ ನಂಬಿಕೆ ನಮಗೆ ಇದೆ. ಈ ಹಿಂದೆ ಜಿಲ್ಲಾ ಉಸ್ತುವಾರಿ ಸಚಿವರ ಅಧ್ಯಕ್ಷತೆಯಲ್ಲಿ ಸಭೆ ನಡೆಸುವುದಾಗಿ ಭರವಸೆ ನೀಡಿದ್ದೆ. ಅದರಂತೆ ಮಾತನ್ನು ಉಳಿಸಿಕೊಂಡಿದ್ದೇನೆ.
>
> - ಹೆಚ್.ಕೆ ಸುರೇಶ್, ಶಾಸಕ

### ತಕ್ಷಣವೇ ಸಭೆ ನಡೆಸಿ ಪರಿಹಾರ

ಜನಸ್ಪಂದನ ಸಭೆಯ ನಂತರ ಅಧಿಕಾರಿಗಳ ಸಭೆ ನಡೆಸಿ ಜನರ ಸಮಸ್ಯೆಗಳ ಪರಿಹಾರಕ್ಕೆ ಆದ್ಯತೆ ನೀಡಲಾಗುವುದು. ಜನರ ಸಮಸ್ಯೆಗಳನ್ನು ಅಲ್ಲಿಯೇ ದಾಖಲಿಸಿಕೊಂಡು, ಅದೇ ದಿನ ಅಧಿಕಾರಿಗಳ ಸಭೆಯಲ್ಲಿ ಪರಿಶೀಲನೆ ನಡೆಸಲಾಗುತ್ತದೆ. ಯಾವ ಸಮಸ್ಯೆ ಎಷ್ಟರ ಮಟ್ಟಿಗೆ ಪರಿಹಾರವಾಗುತ್ತಿದೆ ಎಂಬುದನ್ನು ಪರಿಶೀಲಿಸಲಾಗುವುದು. ಜಿಲ್ಲಾಡಳಿತವೂ ಅದನ್ನು ಗಂಭೀರವಾಗಿ ತೆಗೆದುಕೊಂಡು ಕಾರ್ಯನಿರ್ವಹಿಸುತ್ತಿದೆ. ಎಲ್ಲಾ ಸಮಸ್ಯೆಗಳಿಗೂ ಶೇ.100 ಪರಿಹಾರ ಸಾಧ್ಯವಿಲ್ಲದಿದ್ದರೂ, ಕನಿಷ್ಠ ಶೇ.60 ರಿಂದ 75ರ ಮಟ್ಟಿಗೆ ಸಮಸ್ಯೆಗಳನ್ನು ಪರಿಹರಿಸುವ ಗುರಿಯೊಂದಿಗೆ ಕೆಲಸ ಮಾಡಲಾಗುತ್ತಿದೆ ಎಂದು ಹೇಳಿದರು.

### ಜಿಲ್ಲಾ ಕಾರ್ಮಿಕ ಅಧಿಕಾರಿಗೆ ತರಾಟೆ

**ಬೇಲೂರು:** ಕಳೆದ ಐದು ವರ್ಷದಿಂದ ವೇತನದ ಜೊತೆಗೆ ಇಎಸ್‌ಐ ಮತ್ತು ಪಿಎಫ್ ಹಣ ಕಟ್ಟದಿರುವುದರಿಂದ ಸೇವಾ ಭದ್ರತೆಯಿಂದ ವಂಚಿತರಾಗಿದ್ದೇವೆಂದು ಪುರಸಭೆ ಹೊರಗುತ್ತಿಗೆ ನೌಕರರು ತಮ್ಮ ಸಂಕಷ್ಟವನ್ನು ಜಿಲ್ಲಾ ಉಸ್ತುವಾರಿ ಸಚಿವ ಕೃಷ್ಣಬೈರೇಗೌಡ ಅವರ ಎದುರು ಹೇಳಿಕೊಂಡರು.

ಆಕ್ರೋಶ ವ್ಯಕ್ತಪಡಿಸಿದ ಸಚಿವರು, ಜಿಲ್ಲಾ ಕಾರ್ಮಿಕ ಅಧಿಕಾರಿ ಯಮುನಾ ಅವರ ವಿರುದ್ಧ ಆಕ್ರೋಶ ವ್ಯಕ್ತಪಡಿಸಿ, ಅಧಿಕಾರಿಯನ್ನು ಅಮಾನತು ಮಾಡುವಂತೆ ಜಿಲ್ಲಾಧಿಕಾರಿಗೆ ಸೂಚನೆ ನೀಡಿದರು. ಪುರಸಭೆ ಮುಖ್ಯಾಧಿಕಾರಿ ಬಸವರಾಜು ಶಿಗ್ಗಾವಿ ಅವರಿಗೂ ನಯಾ ಪೈಸೆ ಕಾನೂನು ಕಲಿತಿಲ್ಲವೆಂದು ಅಸಮಾಧಾನ ಹೊರಹಾಕಿದರು. ಐದು ವರ್ಷಗಳಿಂದ ಪಿಎಫ್ ಮತ್ತು ಇಎಸ್‌ಐ ಇಲ್ಲದೆ ಹೇಗೆ ವೇತನ ಪಾವತಿ ಮಾಡಲಾಗಿದೆ. ಪರಿಶೀಲನೆಗೆ ಯಾವುದೇ ವ್ಯವಸ್ಥೆ ಇರಲಿಲ್ಲವೇ. ಕಣ್ಮುಚ್ಚಿಕೊಂಡು ಹೇಗೆ ಹಣ ಬಿಡುಗಡೆ ಮಾಡಿದ್ದೀರಿ ಎಂದು ಪ್ರಶ್ನಿಸಿದರು.

ಇದು ಶಾಸನಬದ್ಧ ಅಪರಾಧ. ಕಾರ್ಮಿಕರ ಹಕ್ಕುಗಳನ್ನು ರಕ್ಷಿಸುವುದು ನಿಮ್ಮ ಕರ್ತವ್ಯ. ಇಂತಹ ನಿರ್ಲಕ್ಷ್ಯ ಅಕ್ಷಮ್ಯ. ಸಂಬಂಧಪಟ್ಟವರ ವಿರುದ್ಧ ಎಫ್‌ಐಆರ್ ದಾಖಲಿಸಿ ಕಾನೂನು ಕ್ರಮ ಕೈಗೊಳ್ಳಬೇಕೆಂದು ಜಿಲ್ಲಾಧಿಕಾರಿಗೆ ನಿರ್ದೇಶನ ನೀಡಿದರು.

## ಶಾಸಕ ಸ್ವರೂಪ್ ಹುಟ್ಟುಹಬ್ಬ ಆಚರಣೆ



• ಪ್ರಜೋದಯ ವರದಿ

**ಹಾಸನ:** ಶಾಸಕ ಹೆಚ್.ಪಿ.ಸ್ವರೂಪ್ ಅವರು ಶುಕ್ರವಾರ ತಮ್ಮ 43ನೇ ಹುಟ್ಟುಹಬ್ಬ ಆಚರಿಸಿಕೊಂಡರು.

ಜೆಡಿಎಸ್ ಕಾರ್ಯಕರ್ತರು ಹಾಗು ಅಭಿಮಾನಿಗಳು, ಕುಟುಂಬ ಸದಸ್ಯರೊಂದಿಗೆ ವಿವಿಧ ದೇವಾಲಯಗಳಿಗೆ ಭೇಟಿ ನೀಡಿ ವಿಶೇಷ ಪೂಜೆ ಸಲ್ಲಿಸಿದ ಶಾಸಕರು, ನಗರದ ಆದಿಚುಂಚನಗಿರಿ ಮಠಕ್ಕೆ ಭೇಟಿ ಶ್ರೀ ಶಂಭುನಾಥ ಸ್ವಾಮೀಜಿ ಅವರ ಆಶೀರ್ವಾದ ಪಡೆದರು.

ಬಳಿಕ ಅವರ ನಿವಾಸದ ಎದುರು ಜಮಾಯಿಸಿದ ನೂರಾರು ಮಂದಿ ಅಭಿಮಾನಿಗಳು ತಮ್ಮ ನೆಚ್ಚಿನ ಶಾಸಕರಿಗೆ ಬಗೆ ಬಗೆಯ ಹೂವಿನ ಹಾರ ಹಾಕಿ, ಬಣ್ಣ ಬಣ್ಣದ ಕೇಕ್ ಕತ್ತರಿಸಿ ಶುಭಾಶಯ ಕೋರಿದರು. ಇನ್ನೂ ಕೆಲವರು ಕ್ರೇನ್‌ನಲ್ಲಿ ಬೃಹತ್ ಗಾತ್ರದ ಸೇಬಿನ ಹಾರ ಹಾಕಿ ಅಭಿಮಾನ ಮೆರೆದರು. ಸಾರ್ವಜನಿಕರಿಗೆ ಅನ್ನದಾನದ ವ್ಯವಸ್ಥೆ ಮಾಡಲಾಗಿತ್ತು. ಮಾಜಿ ಪ್ರಧಾನಿ ಹೆಚ್.ಡಿ.ದೇವೇಗೌಡರು, ವಿವಿಧ ರಾಜಕೀಯ ನಾಯಕರು ಶಾಸಕರಿಗೆ ಹುಟ್ಟುಹಬ್ಬದ ಶುಭಾಶಯ ಕೋರಿದ್ದಾರೆ.

## ಆಟೋ ಚಾಲಕರ ನೆರವಿಗೆ ಬಾರದ ಕೇಂದ್ರ ಸರ್ಕಾರ

• ಪ್ರಜೋದಯ ವರದಿ

**ಬೆಂಗಳೂರು:** ಸಂಕಷ್ಟದಲ್ಲಿರುವ ಆಟೋ ಚಾಲಕರ ರಕ್ಷಣೆ ವಿಚಾರದಲ್ಲಿ ಕೇಂದ್ರ ಸರ್ಕಾರ ಸಂಪೂರ್ಣ ವಿಫಲವಾಗಿದೆ ಎಂದು ಆಹಾರ ಸಚಿವ ಕೆ.ಹೆಚ್. ಮುನಿಯಪ್ಪ ಅವರು ಆರೋಪಿಸಿದ್ದಾರೆ.

ಪಶ್ಚಿಮ ಏಷ್ಯಾದಲ್ಲಿನ ಬಿಕ್ಕಟ್ಟಿನ ನಂತರ ಆಟೋ ಗ್ಯಾಸ್ ಪೂರೈಕೆ ಸಮಸ್ಯೆಗೆ ಸಂಬಂಧಿಸಿ ಅಧಿಕಾರಿಗಳು ಮತ್ತು ಸರ್ಕಾರಿ ತೈಲ, ಅನಿಲ ಕಂಪನಿಗಳ ಪ್ರತಿನಿಧಿಗಳೊಂದಿಗೆ ಸಭೆ ನಡೆಸಿದ ಅವರು ಸುದ್ದಿಗಾರರೊಂದಿಗೆ ಮಾತನಾಡಿ, ವಾಣಿಜ್ಯ ಸಿಲಿಂಡರ್ ಪೂರೈಕೆಯಲ್ಲಿ ಸುಧಾರಣೆ ಆಗಿದೆ. ಆಟೋ ಗ್ಯಾಸ್ ಪೂರೈಕೆಯಲ್ಲಿ ಯಾವುದೇ ಸುಧಾರಣೆ ಆಗಿಲ್ಲವೆಂದರು.

# ಸಿದ್ದರಾಮಯ್ಯ ಕಣ್ಣೀರು ಸುರಿಸಿದ್ದು ನೆನಪಿಸಿಕೊಳ್ಳಲಿ

## ಕಾಂಗ್ರೆಸ್ ಬಿಟ್ಟು 5 ಸ್ಥಾನ ಗೆದ್ದು ತೋರಿಸಿ | ಕುಮಾರಸ್ವಾಮಿ ವಾಗ್ದಾಳಿ

• ಪ್ರಜೋದಯ ವರದಿ

**ಮೈಸೂರು:** ಮುಖ್ಯಮಂತ್ರಿ ಸಿದ್ದರಾಮಯ್ಯ ಹಳೆಯ ದಿನಗಳನ್ನು ಒಮ್ಮೆ ನೆನಪಿಸಿಕೊಳ್ಳಲಿ, 1999ರ ಚುನಾವಣೆಯಲ್ಲಿ ಸೋತಿದ್ದಾಗ ನಮ್ಮ ಮನೆಗೆ ಕಣ್ಣೀರು ಹಾಕಿದ್ರು, ಅವತ್ತು ಬಕೆಟ್ ಇಟ್ಟಿದ್ದರೆ ತುಂಬಿರುತ್ತಿತ್ತು ಎಂದು ಕೇಂದ್ರ ಸಚಿವ ಹೆಚ್.ಡಿ. ಕುಮಾರಸ್ವಾಮಿ ಅವರು ವಾಗ್ದಾಳಿ ನಡೆಸಿದರು.

ಸುದ್ದಿಗಾರರೊಂದಿಗೆ ಶುಕ್ರವಾರ ಮಾತನಾಡಿದ ಅವರು, ಸಿದ್ದರಾಮಯ್ಯ ಜೆಡಿಎಸ್‌ನಲ್ಲಿದ್ದಾಗ 58 ಸೀಟು ಗೆದ್ದಿದ್ದೆವು ಎನ್ನುತ್ತಾರೆ. 1999ರಲ್ಲೂ ಅವರೇ ಅಧ್ಯಕ್ಷರಾಗಿದ್ದರು. ಆಗ ಎಷ್ಟು ಸೀಟು ಗೆದ್ದಿದ್ದರು. ಮಹದೇವಪ್ಪ, ಸಿದ್ದರಾಮಯ್ಯ ಇಬ್ಬರೂ ಮನೆಗೆ ಬಂದು ಕಣ್ಣೀರಿಟ್ಟಿದ್ದರು. ಸಿದ್ದರಾಮಯ್ಯನವರು ಒಮ್ಮೆ ತಮ್ಮ ಹಳೆಯ ದಿನಗಳನ್ನು ನೆನಪಿಸಿಕೊಳ್ಳಲಿ ಎಂದು ತಿರುಗೇಟು ನೀಡಿದರು.

ರಾಜಕೀಯವೇ ಸಾಕೆಂದು ಕಣ್ಣೀರಿಟ್ಟದ ಸಿದ್ದರಾಮಯ್ಯ ಅವರಿಗೆ ನಮ್ಮ ತಂದೆ ಹೆಚ್.ಡಿ.ದೇವೇಗೌಡರು ಸಮಾಧಾನಪಡಿಸಿದ್ದರು. ಚುನಾವಣೆಯಲ್ಲಿ ದೇವೇಗೌಡರು, ನಾನು, ಹೆಚ್.ಡಿ.ರೇವಣ್ಣ, ಮಹದೇವಪ್ಪ, ಸಿದ್ದರಾಮಯ್ಯ ಸೇರಿ ಬಹುತೇಕರು ಸೋತಿದ್ದೆವು. ಆಗ ನನಗೆ ರಾಜಕೀಯ ಬೇಡವೆಂದು ಸಿದ್ದರಾಮಯ್ಯ ಕಣ್ಣೀರು ಹಾಕಿದ್ದರು. 2004ರಲ್ಲಿ



ಮಂಡ್ಯ, ರಾಮನಗರದಲ್ಲಿ ಸಿದ್ದರಾಮಯ್ಯ ಪ್ರಚಾರಕ್ಕೆ ಬರಲಿಲ್ಲ. ನಾವು ಕೂಡ ಸಿದ್ದರಾಮಯ್ಯ ಅವರನ್ನು ಕರೆಯಲಿಲ್ಲ. ಸಿದ್ದರಾಮಯ್ಯ ಅಹಿಂದ ಅಂತ ಸಮುದಾಯಗಳ ಸಂಘಟನೆ ಮಾಡಿದರು. ದೇವೇಗೌಡರಿಗೆ ಅನ್ಯಾಯ ಮಾಡಿದರು, ಬೆನ್ನಿಗೆ ಚೂರಿ ಹಾಕಿದರೆಂದು ವಾಗ್ದಾಳಿ ನಡೆಸಿದರು. 2006ರಲ್ಲಿ ಕೇವಲ 200 ಮತಗಳಿಂದ ಗೆದ್ದಿರುವುದನ್ನು ಅವರು ನೆನಪಿಸಿಕೊಳ್ಳಬೇಕು. ಚುನಾವಣೆಯಲ್ಲಿ ಸೋಲು-ಗೆಲುವು ಸಾಮಾನ್ಯ. ಚಾಮುಂಡೇಶ್ವರಿ ಕ್ಷೇತ್ರದಲ್ಲಿ ಸಿದ್ದರಾಮಯ್ಯ ಏಕೆ ಸೋತರು. ಜೆಡಿಎಸ್ ಬಗ್ಗೆ ಮಾತನಾಡುವ ನೈತಿಕತೆ ಇಲ್ಲ. ಸಿದ್ದರಾಮಯ್ಯ ಅಹಿಂದ ಚಾಂಪಿಯನ್ ಎಂದು ಹೇಳಿಕೊಳ್ಳುತ್ತಾರೆ. ಕಾಂಗ್ರೆಸ್ ಪಕ್ಷ ಬಿಟ್ಟು ಬಂದು 5 ಸ್ಥಾನ ಗೆಲ್ಲಲಿ ಎಂದು ಸವಾಲೆಸೆದರು.

**ಹಣ ವಸೂಲಿಗಾಗಿ ಮಗನ ನೇಮಕ**

ಹಣ ವಸೂಲಿಗಾಗಿ ಸಿದ್ದರಾಮಯ್ಯ ತಮ್ಮ ಮಗನನ್ನು ನೇಮಕ ಮಾಡಿಕೊಂಡಿದ್ದಾರೆ. ಪುತ್ರನ ವಸೂಲಿ ಹೇಗಿದೆ ಎಂಬುದು ಎಲ್ಲಾ ಅಧಿಕಾರಿಗಳಿಗೆ ಗೊತ್ತಿದೆ. ಸಿದ್ದರಾಮಯ್ಯಗೆ ಕುಟುಂಬ ರಾಜಕಾರಣದ ಬಗ್ಗೆ ಮಾತಾಡುವ ನೈತಿಕತೆಯ ಇಲ್ಲ. ನಾನು ನನ್ನ ಮಗನನ್ನು ವಸೂಲಿಗಾಗಿ ರಾಜಕೀಯಕ್ಕೆ ತಂದಿಲ್ಲ. ಜನರ ಅಪೇಕ್ಷೆಯಂತೆ ನಿಖಿಲ್ ರಾಜಕೀಯಕ್ಕೆ ಬಂದಿದ್ದಾನೆಂದು ತಿರುಗೇಟು ನೀಡಿದರು.

**ಸಿಎಂ ಆದದ್ದು ದೇವರ ಕೃಪೆಯಿಂದ**

ಹಿಂದೆ ನಾನು ಮುಖ್ಯಮಂತ್ರಿ ಆಗಿದ್ದು ದೇವರ ಕೃಪೆಯಿಂದ. ಒಮ್ಮೆಯೂ ನಮಗೆ ಬಹುಮತ ಬಂದಿರಲಿಲ್ಲ, ಆದರೂ ಎರಡು ಬಾರಿ ವ'ುಖ್ಯವ'ಂತ್ರಿಯಾದೆ. ಮುಂದೆಯೂ ದೇವರ ಕೃಪೆ ಇದ್ದರೆ ಆಗುತ್ತೇನೆ. ಅದು ನನ್ನ ಕೈಯಲ್ಲಿ ಇಲ್ಲ ಎಂದು ಪ್ರತಿಕ್ರಿಯಿಸಿದರು.

ಕುಮಾರಸ್ವಾಮಿ ಮುಖ್ಯಮಂತ್ರಿ ಆಗುತ್ತಾನೆಂದು ಯಾವ ಜ್ಯೋತಿಷಿಯೂ ಹೇಳಿರಲಿಲ್ಲ. ಅದರೂ ಆಗಿದ್ದೆ ಎಂದರು.

> ಸಿದ್ದರಾಮಯ್ಯ ಮುಖ್ಯಮಂತ್ರಿ ಸ್ಥಾನ ಬಿಟ್ಟುಕೊಡುವುದಿಲ್ಲ. ಅವರ ಸ್ವಭಾವ ನನಗೆ ಗೊತ್ತಿದೆ. ಅದಕ್ಕಾಗಿಯೇ ಅವರು ದೇವರ ಮೊರೆ ಹೋಗುತ್ತಿದ್ದಾರೆ. ಮನಪೂರ್ವಕವಾಗಿ ದೇವರಲ್ಲಿ ಪ್ರಾರ್ಥನೆ ಸಲ್ಲಿಸಬೇಕೆ ಹೊರತು ಸ್ವಾರ್ಥಕ್ಕಾಗಿ ಅಲ್ಲ. ಸ್ವಾರ್ಥಕ್ಕೆ ಬೇಡಿದರೆ ದೇವರು ವರ ಕೊಡುವುದಿಲ್ಲ.
>
> -ಹೆಚ್.ಡಿ.ಕೆ., ಕೇಂದ್ರ ಸಚಿವ

# ಗ್ರಾಹಕರಿಗೆ ಸಿಗದ ಸಿಲಿಂಡರ್ ಕಾಳಸಂತೆಯಲ್ಲಿ ಲಭ್ಯ

## ಕೇಂದ್ರ ಸರ್ಕಾರದ ವಿರುದ್ಧ ಕೃಷ್ಣಬೈರೇಗೌಡ ಅಸಮಾಧಾನ

• ಪ್ರಜೋದಯ ವರದಿ

**ಬೇಲೂರು:** ಗ್ರಾಹಕರಿಗೆ ಸಿಗದ ಎಲ್‌ಪಿಜಿ ಅನಿಲ ಸಿಲಿಂಡರ್‌ಗಳು, ಕಾಳಸಂತೆಯಲ್ಲಿ ಹೇಗೆ ಸಿಗುತ್ತವೆ. ಗ್ಯಾಸ್ ಸರಬರಾಜು ಮಾಡುವ ಕೇಂದ್ರ ಸರ್ಕಾರ ಸ್ವಾಮ್ಯದ ಕಂಪನಿಗಳು ಯಾರನ್ನು ಯಾಮಾರಿಸಿ ಕಾಳಸಂತೆಗೆ ಬರುತ್ತಿವೆ ಎಂದು ಜಿಲ್ಲಾ ಉಸ್ತುವಾರಿ ಸಚಿವ ಕೃಷ್ಣಬೈರೇಗೌಡ ಅವರು ಪ್ರಶ್ನಿಸಿದರು.

ಶುಕ್ರವಾರ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಜನರಿಗೆ ಸಿಗದ ಸಿಲಿಂಡರ್‌ಗಳು ಕಾಳಸಂತೆಯಲ್ಲಿ ಸಿಗುತ್ತವೆ ಎನ್ನುವುದಾದರೆ ಇದು ಆಡಳಿತ ವೈಫಲ್ಯ ಹೌದೋ, ಅಲ್ಲವೋ. ಈ ಸಮಸ್ಯೆಯನ್ನು ಕೇಂದ್ರ ಸರ್ಕಾರ ತಕ್ಷಣ ನಿವಾರಣೆ ಮಾಡಬೇಕು. ಎಲ್‌ಪಿಜಿ ಸಿಲಿಂಡರ್



ಸಮಸ್ಯೆ ದಿನೇ ದಿನೇ ಉಲ್ಬಣವಾಗುತ್ತಿದೆ. ಯುದ್ಧ ಇದೆ ನಿಜ. ಆದರೆ, ಕೇಂದ್ರ ಸರ್ಕಾರದವರು ಜವಾಬ್ದಾರಿ ತೆಗೆದುಕೊಂಡು ಏನಾದರೂ ಪರಿಹಾರವನ್ನು ತಕ್ಷಣ ಕೊಡಬೇಕು. ಸಣ್ಣಪುಟ್ಟ ಕಾಫಿ, ತಿಂಡಿ ಅಂಗಡಿಗಳಿಗೆ ಗ್ಯಾಸ್ ಸಿಗದೆ ಅವರ ಜೀವನೋಪಾಯವೇ ಬಂದ್ ಆಗಿದೆ. ಲಕ್ಷಾಂತರ ಆಟೋದವರಿಗೆ ಗ್ಯಾಸ್ ಸಿಗದೆ ಅವರ ಜೀವನದ ಸಂಪಾದನೆ ನಿಂತು ಹೋಗಿದೆ ಎಂದು ಹೇಳಿದರು.

ಸದ್ಯಕ್ಕೆ ತಾತ್ಕಾಲಿಕ ಕದನ ವಿರಾಮ ಘೋಷಣೆ ಮಾಡಿದ್ದಾರೆ. ಈಗಲಾದರೂ ಕೇಂದ್ರ ಸರ್ಕಾರ ತಕ್ಷಣ ಸಮಸ್ಯೆ ಪರಿಹಾರ ಮಾಡಬೇಕು. ಲಕ್ಷಾಂತರ ಜನರ ದಿನದ ಸಂಪಾದನೆ ನಿಂತು ಹೋಗಿದೆ. ಸಣ್ಣಪುಟ್ಟ ಹೋಟೆಲ್‌ಗಳಿಗೆ ಸಮಸ್ಯೆಯಾಗಿದೆ ದೊಡ್ಡ ಹೋಟೆಲ್‌ಗಳು ಕಾಳಸಂತೆಯಲ್ಲಿ ಸಿಲಿಂಡರ್ ತೆಗೆದುಕೊಳ್ಳುತ್ತಿದ್ದಾರೆ. ನಾಲ್ಕೈದು ಸಾವಿರ ಕೊಟ್ಟರೆ ಬ್ಲಾಕ್ ಮಾರ್ಕೆಟ್‌ನಲ್ಲಿ ಸಿಲಿಂಡರ್ ಸಿಗುತ್ತದೆ ಎಂದು ಜನರು ಮಾತನಾಡುತ್ತಿದ್ದಾರೆ. ಅದನ್ನು ತಡೆಯಲು ಏಕೆ ಆಗುತ್ತಿಲ್ಲ ಎಂದು ಪ್ರಶ್ನಿಸಿದರು.

**ಎರಡು ಕ್ಷೇತ್ರಗಳಲ್ಲೂ ಗೆಲುವು**

ಎರಡು ಕ್ಷೇತ್ರಗಳ ಉಪಚುನಾವಣೆ ಫಲಿತಾಂಶ ವಿಚಾರವಾಗಿ ಪ್ರತಿಕ್ರಿಯಿಸಿದ ಅವರು, ಉಪಚುನಾವಣೆಯಲ್ಲಿ ಎರಡು ಸ್ಥಾನ ಖಂಡಿತವಾಗಿಯೂ ನಾವು, ಕಾಂಗ್ರೆಸ್ ಪಕ್ಷ ಗೆಲ್ಲುತ್ತೆ ಎನ್ನುವ ವಿಶ್ವಾಸ ಇದೆ. ಚುನಾವಣಾ ಪ್ರಚಾರಕ್ಕೆ ನಾನು ಹೋಗಿರಲಿಲ್ಲ, ಬೇರೆ ರಾಜ್ಯದ ಚುನಾವಣೆಗೆ ಹೋಗಿದ್ದೆ. ಉಪಚುನಾವಣೆ ಪ್ರಚಾರದಲ್ಲಿ ನಮ್ಮ ಮುಖಂಡರೆಲ್ಲಾ ಭಾಗವಹಿಸಿದ್ದಾರೆ. ಅವರ ವರದಿ ಪ್ರಕಾರ ನೂರಕ್ಕೆ ನೂರರಷ್ಟು ಎರಡು ಸ್ಥಾನಗಳನ್ನು ಗೆಲ್ಲುತ್ತೆ ಎನ್ನುವ ವಿಶ್ವಾಸ ಇಟ್ಟುಕೊಂಡಿದ್ದೇನೆಂದರು.

ಸಂಸದ ಶ್ರೇಯಸ್ ಪಟೇಲ್, ಶಾಸಕ ಹೆಚ್.ಕೆ.ಸುರೇಶ್ ಇತರರು ಹಾಜರಿದ್ದರು.

## ಚಿನ್ನದ ಸರ ಕಳವು

**ಅರಸೀಕೆರೆ :** ಸಾರಿಗೆ ಸಂಸ್ಥೆ ಬಸ್ ಹತ್ತುವಾಗ ಮಹಿಳೆಯ ಕೊರಳಿನಲ್ಲಿದ್ದ 21 ಗ್ರಾಂ ತೂಕದ ಚಿನ್ನದ ಸರವನ್ನು ಕಳವು ಮಾಡಿ ರುವ ಘಟನೆ ತಾಲ್ಲೂಕಿನ ಬಾಣಾವರ ಬಸ್ ನಿಲ್ದಾಣದಲ್ಲಿ ನಡೆದಿದೆ.

ಮಾದಿಹಳ್ಳಿ ಹೋಬಳಿ ಇಬ್ಬೀಡು ಹೊಸಹಳ್ಳಿ ಗ್ರಾಮದ ಪಾಲಾಕ್ಷಮ್ಮ ಅವರು ಗುರುವಾರ ಬೇಲೂರಿಗೆ ತೆರಳುವ ಬಸ್ ನಿಲ್ಲುವ ಜಾಗದಲ್ಲಿ ನಿಂತಿದ್ದರು. ಕೆಲ ಸಮ ಯದ ಬಳಿಕ ಬಸ್ ಬಂದಿದ್ದು ಹತ್ತುವಾಗ ಜನಸಂದಣಿಯನ್ನೇ ಅವಕಾಶವಾಗಿ ಬಳಸಿ ಕೊಂಡ ಕಿಡಿಗೇಡಿಗಳು ಚಿನ್ನದ ಸರವನ್ನು ಕಿತ್ತುಕೊಂಡಿದ್ದಾರೆ. ಬಾಣಾವರ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

## ಟೀಕೆಗಳಿಗೆ ಹೆದರಿ ಜನಸೇವೆಯಿಂದ ಹಿಂದೆ ಸರಿಯಲ್ಲ: ಕೆ.ಎಂ.ಶಿವಲಿಂಗೇಗೌಡ

• ಪ್ರಜೋದಯ ವರದಿ

**ಅರಸೀಕೆರೆ:** ಯಾರು ಏನೇ ಟೀಕೆ, ಟಿಪ್ಪಣಿ ಮಾಡಿದರೂ ಜನಸೇವೆಯಿಂದ ವಿಮುಖನಾಗುವುದಿಲ್ಲ, ಜನರ ಆಶೀರ್ವಾದವಿರುವವರೆಗೆ ರಾಜಕೀಯದಲ್ಲಿರುತ್ತೇನೆಂದು ಶಾಸಕ ಕೆ.ಎಂ. ಶಿವಲಿಂಗೇಗೌಡ ಅವರು ಹೇಳಿದರು.

ಎತ್ತಿನಹೊಳೆ ಯೋಜನೆಯಡಿ ತಾಲ್ಲೂಕಿನ ಗಂಡಸಿ ಹೋಬಳಿ ಮುದುಡಿ-ಸಿದ್ದಾಪುರ ಗ್ರಾಮದಲ್ಲಿ 75 ಲಕ್ಷ ರೂ. ವೆಚ್ಚದ ಸಿಸಿ ರಸ್ತೆ ಕಾಮಗಾರಿಗೆ ಭೂಮಿಪೂಜೆ ನೆರವೇರಿಸಿ ಮಾತನಾಡಿದ ಅವರು, ನಮ್ಮ ಕ್ಷೇತ್ರ ನೀರಾವರಿ ಸೌಲಭ್ಯ ವಂಚಿತ ಬಯಲು ಸೀಮೆ ಪ್ರದೇಶ. ನಾನು ಶಾಸಕನಾದ ಮೇಲೆ ಹೋರಾಟದ ಫಲವಾಗಿ ಕುಡಿಯುವ ನೀರಿಗಾಗಿ ಎತ್ತಿನಹೊಳೆ ಯೋಜನೆ ಕಾರ್ಯರೂಪಗೊಂಡಿದೆ. ನನ್ನ ಅವಧಿಯಲ್ಲೇ ಕಾಮಗಾರಿ ಅಂತಿಮ ಹಂತ ತಲುಪಿದೆ. ಕೆಲವೇ ದಿನಗಳಲ್ಲಿ ಕಾಲುವೆ ಮೂಲಕ ನೀರು ಹರಿಯುತ್ತದೆ. ಅಭಿವೃದ್ಧಿ ಕಾಮಗಾರಿ ಸಹಿಸದೆ ಕೆಲವರು ಇಲ್ಲಸಲ್ಲದ ಆರೋಪ ಮಾಡುತ್ತಾರೆ. ಆಧಾರ ರಹಿತ ಆರೋಪಗಳಿಗೆ ನಾನು ತಲೆ ಕೆಡಿಸಿಕೊಳ್ಳುವುದಿಲ್ಲ. ಕ್ಷೇತ್ರದ ಜನರ ಆಶೀರ್ವಾದ ಇರುವವರೆಗೆ ರಾಜಕೀಯದಲ್ಲಿರುತ್ತೇನೆಂದರು.

ತಾಲ್ಲೂಕು ಪಂಚಾಯಿತಿ ಮಾಜಿ ಅಧ್ಯಕ್ಷ ಮುದುಡಿ ವಿಶ್ವಣ್ಣ, ಎಪಿಎಂಸಿ ಮಾಜಿ ಅಧ್ಯಕ್ಷ ಶಿವಪ್ಪ, ಮುಖಂಡರಾದ ಶಂಭುಲಿಂಗೇಗೌಡ,



ನಂದನ್, ಚಂದ್ರಶೇಖರ, ವೆಂಕಟೇಶ್, ಪ್ರಕಾಶ್, ಶಿವಣ್ಣ, ಅಭಿ, ಚಂದ್ರು, ಕೃಷ್ಣನಾಯ್ಕ ಕುಮಾರ, ಜಯಣ್ಣ, ರಮೇಶ್, ಎಇಇ ಇಂದುಕುಮಾರ್, ಗುತ್ತಿಗೆದಾರ ಜ್ಞಾನೇಶ್ ಇತರರಿದ್ದರು.

## ಕಲ್ಕೆರೆ ಗ್ರಾ.ಪಂ.ಮಾಜಿ ಅಧ್ಯಕ್ಷನ ಮೇಲೆ ಹಲ್ಲೆ

• ಪ್ರಜೋದಯ ವರದಿ

**ಚನ್ನರಾಯಪಟ್ಟಣ:** ಸರ್ಕಾರಿ ಆಸ್ತಿ ಉಳಿಸಲು ಮುಂದಾದ ಕಾರಣಕ್ಕೆ ಎಂಟು ಜನರ ಗುಂಪು ಕಲ್ಕೆರೆ ಗ್ರಾಮ ಪಂಚಾಯಿತಿ ಮಾಜಿ ಅಧ್ಯಕ್ಷ ವಾಸುದೇವ ಅವರ ಮೇಲೆ ಹಲ್ಲೆ ನಡೆಸಿದ್ದಾರೆಂಬ ಆರೋಪ ಕೇಳಿ ಬಂದಿದೆ.

ಗ್ರಾಮದ ಅಶೋಕ, ರಾಮಮೂರ್ತಿ, ಧನುಶ್, ಜಶ್ವಂತ್, ದರ್ಶನ್, ಕೃಷ್ಣೇಗೌಡ, ದಿಲೀಪ್ ಹಾಗು ಧರ್ಮೇಶ್ ಆರೋಪಿಗಳು. ಕಲ್ಕೆರೆ ಗ್ರಾಮ ಪಂಚಾಯಿತಿ ವ್ಯಾಪ್ತಿಯ ಕಟ್ಟೆಮನೆ ವೃತ್ತದ ಶಿಥಿಲಾವಸ್ಥೆ ತಲುಪಿದ್ದ ಗ್ರಂಥಾಲಯ ಕಟ್ಟಡ ದುರಸ್ತಿ ಮಾಡಿಸುತ್ತಿದ್ದಾಗ ಹಲ್ಲೆ ಮಾಡಿದ್ದಾರೆ ಎನ್ನಲಾಗಿದೆ.

ತಹಶೀಲ್ದಾರ್ ಹಾಗು ಭೂ ದಾಖಲೆಗಳ ಸಹಾಯಕ ನಿರ್ದೇಶಕರ ವರದಿ ಪ್ರಕಾರ ಈ ಜಾಗ ಗ್ರಾಮ ಪಂಚಾಯಿತಿಗೆ ಸೇರಿದೆ. ಹೀಗಾಗಿ ಗ್ರಾಮ ಹಾಗು ತಾಲ್ಲೂಕು ಪಂಚಾಯಿತಿ ಅನುದಾನದಡಿ ಕಟ್ಟಡವನ್ನು ಉನ್ನತೀಕರಿಸಿ ಡಿಜಿಟಲ್ ಗ್ರಂಥಾಲಯ ಸ್ಥಾಪನೆಗೆ ಕ್ರಮ ಕೈಗೊಳ್ಳಲಾಗಿತ್ತು. ಆದರೆ, ಆಸ್ತಿ ತಮ್ಮದೆಂದು ಹೇಳಿಕೊಂಡು ಬಂದ ಎಂಡು ಜನರ ಗುಂಪು ಅವಾಚ್ಯ ಶಬ್ದಗಳಿಂದ ನಿಂದಿಸುತ್ತಾ ಹಲ್ಲೆ ನಡೆಸಿದೆ. ಗಲಾಟೆಯ ವಿಡಿಯೋ ಮಾಡಿ ಕೊಳ್ಳುತ್ತಿದ್ದಾಗ ಮೊಬೈಲ್ ಕಸಿದು ಕೊಂಡಿರುವ ಆರೋಪಿಗಳು ಜೇಬಿ ನಲ್ಲಿದ್ದ 9,300 ರೂ. ಕಿತ್ತುಕೊಂಡಿದ್ದಾರೆಂದು ವಾಸುದೇವ್ ಆರೋಪಿಸಿದ್ದಾರೆ.

**ದೂರು ದಾಖಲಿಸಲು ವಿಳಂಬ**

ಗಲಾಟೆ ವಿಷಯ ತಿಳಿದರೂ ಎಫ್‌ಐಆರ್ ದಾಖಲಿಸಲು ನುಗ್ಗೇಹಳ್ಳಿ ಪೊಲೀಸರು ವಿಳಂಬ ಮಾಡಿದ್ದಾರೆಂದು ಕರ್ನಾಟಕ ಪ್ರಾಂತ ರೈತ ಸಂಘ ಆರೋಪಿಸಿದೆ. ಸರ್ಕಾರಿ ಆಸ್ತಿ ಉಳಿಸುವ ಉದ್ದೇಶದಿಂದ ವಾಸುದೇವ್ ಹೋರಾಟ ನಡೆಸಿದ್ದಾರೆ. ಆದರೆ, ಪೊಲೀಸರು ದೌರ್ಜನ್ಯ ನಡೆಸಿದ ಗೂಂಡಾಗಳ ರಕ್ಷಣೆಗೆ ಪ್ರಯತ್ನಿಸಿದ್ದಾರೆ. ಇಂತಹ ಗಂಭೀರ ಸ್ವರೂಪದ ಗುಂಪು ಕಟ್ಟಿಕೊಂಡು ಬಂದು ಹಲ್ಲೆ ನಡೆದಾಗಲೂ ದೂರು ತೆಗೆದುಕೊಳ್ಳಲು ನಿರಾಕರಿಸಿದ ಕುರಿತು ಇಲಾಖೆ ವಿಚಾರಣೆ ನಡೆಸಬೇಕು. ಕೂಡಲೇ ಎಲ್ಲಾ ಆರೋಪಿಗಳನ್ನು ಬಂಧಿಸಬೇಕೆಂದು ಕೆಪಿಆರ್‌ಎಸ್ ಜಿಲ್ಲಾಧ್ಯಕ್ಷ ಹೆಚ್.ಆರ್.ನವೀನ್ ಕುಮಾರ್ ಅವರು ಆಗ್ರಹಿಸಿದ್ದಾರೆ. ಪ್ರಕರಣ ಸಂಬಂಧ ನುಗ್ಗೇಹಳ್ಳಿ ಠಾಣೆಯಲ್ಲಿ ಎಫ್‌ಐಆರ್ ದಾಖಲಾಗಿದೆ.

## ಸೆಮಿಸ್ಟರ್ ಪರೀಕ್ಷಾ ಫಲಿತಾಂಶಕ್ಕೆ ತಡೆ | ಹೋರಾಟದ ಹಾದಿ ಹಿಡಿದ ಪದವೀಧರರು

# 24 ಕಾನೂನು ವಿದ್ಯಾರ್ಥಿಗಳ ಭವಿಷ್ಯ ಅತಂತ್ರ

• ಪ್ರಜೋದಯ ವರದಿ

**ಹಾಸನ:** ನಿಗದಿಗಿಂತ ಅಧಿಕ ವಿದ್ಯಾರ್ಥಿಗಳಿಗೆ ಪ್ರವೇಶ ಕಲ್ಪಿಸಲಾಗಿದೆ ಎಂಬ ನೆಪವೊಡ್ಡಿ ನಗರದ ಸರ್ಕಾರಿ ಕಾನೂನು ಕಾಲೇಜಿನ 24 ವಿದ್ಯಾರ್ಥಿಗಳ ಮಾನ್ಯತೆಯನ್ನು ಹುಬ್ಬಳ್ಳಿ ಕಾನೂನು ವಿಶ್ವವಿದ್ಯಾಲಯ ತಡೆ ಹಿಡಿದಿದ್ದು, ವಕೀಲರಾಗಬೇಕೆಂಬ ಕನಸು ಕಂಡಿದ್ದ ವಿದ್ಯಾರ್ಥಿಗಳ ಭವಿಷ್ಯ ಅಡಕತ್ತರಿಯಲ್ಲಿ ಸಿಲುಕಿದೆ.

ಸರ್ಕಾರಿ ಕಾನೂನು ಕಾಲೇಜಿನ ಆಡಳಿತ ಮಂಡಳಿ ಹಾಗು ರಾಜ್ಯ ಕಾನೂನು ವಿಶ್ವವಿದ್ಯಾಲಯದ ಮಲ ತಾಯಿ ಧೋರಣೆ ಖಂಡಿಸಿ ವಿದ್ಯಾರ್ಥಿ ಗಳು ನ್ಯಾಯಕ್ಕಾಗಿ ಬೀದಿಗಿಳಿದು ಹೋರಾಟ ಮಾಡುವಂತಾಗಿದೆ. ಪ್ರತಿ ವರ್ಷ 60 ವಿದ್ಯಾರ್ಥಿಗಳಿಗಿಂತ ಹೆಚ್ಚು ವಿದ್ಯಾರ್ಥಿಗಳನ್ನು ದಾಖಲಾತಿ ಮಾಡಿಕೊಳ್ಳಲು ಕಾಲೇಜು ಆಡಳಿತಕ್ಕೆ ಅಧಿ ಕಾರ ಇರುವುದಿಲ್ಲ. ಆದರೆ, 2022- 23ನೇ ಸಾಲಿನಲ್ಲಿ ಬೇಡಿಕೆ ಹೆಚ್ಚಿದ್ದ ಕಾರಣ ಬಾರ್ ಕೌನ್ಸಿಲ್ ಆಫ್ ಇಂಡಿಯಾ ಹಾಗು ಹುಬ್ಬಳ್ಳಿ ಕಾನೂನು ವಿಶ್ವವಿದ್ಯಾಲಯಕ್ಕೆ ಹೆಚ್ಚು ವಿದ್ಯಾರ್ಥಿ ಗಳ ದಾಖಲಾತಿಗೆ ಮನವಿ ಮಾಡಿ ಹೇಗೋ ಅನುಮತಿ ಸಿಗುತ್ತದೆಂಬ ಭರವಸೆಯಲ್ಲಿ 60+60 ಅಂದರೆ 120 ವಿದ್ಯಾರ್ಥಿಗಳಿಗೆ



**ವಿದ್ಯಾರ್ಥಿಗಳ ಪ್ರಮುಖ ಬೇಡಿಕೆಗಳು**

- ನಮ್ಮ ದಾಖಲಾತಿ ಮಾನ್ಯವಾಗಬೇಕು
- ಪರೀಕ್ಷಾ ಫಲಿತಾಂಶ ಆನ್ ಲೈನ್‌ನಲ್ಲಿ ಶೀಘ್ರ ಪ್ರಕಟವಾಗಬೇಕು
- ಕಾನೂನು ಪದವಿಯ ಮಾನ್ಯತೆ ದೃಢೀಕೃತವಾಗಬೇಕು

ಪ್ರವೇಶ ನೀಡಲಾಯಿತು.

ಆಗ ದಾಖಲಾದ ವಿದ್ಯಾರ್ಥಿಗಳು ಪ್ರತಿ ಸೆಮಿಸ್ಟರ್ ಪರೀಕ್ಷೆಯನ್ನು ಆತಂಕದಲ್ಲೇ ಬರೆದಿದ್ದಾರೆ. ಮೊದಲ ವರ್ಷದಿಂದ 3ನೇ ವರ್ಷದವರೆಗೆ ಪರೀಕ್ಷಾ ಪ್ರವೇಶಾತಿ ಪತ್ರ ಮತ್ತು ಫಲಿತಾಂಶ ಪ್ರಕಟಿಸಿದ ಕಾನೂನು ವಿಶ್ವವಿದ್ಯಾಲಯ ಈ ವಿದ್ಯಾರ್ಥಿಗಳು ನಾಲ್ಕನೇ ವರ್ಷಕ್ಕೆ ಬಂದ ನಂತರ ಪ್ರವೇಶ ಪತ್ರ ನೀಡಲು ನಿರಾಕರಿಸಿತು. ಕಾನೂನು ವಿದ್ಯಾರ್ಥಿಗಳು ಪರೀಕ್ಷಾ ಹಿಂದಿನ ದಿನದವರೆಗೆ ಪ್ರತಿಭಟನೆ ಮಾಡಿ ಸ್ಥಳೀಯ ಶಾಸಕರು, ಸಂಸದರು ಹಾಗು ಕೇಂದ್ರ ಸಚಿವ ಹೆಚ್.ಡಿ. ಕುಮಾರಸ್ವಾಮಿ ಅವರ ಮೇಲೆ ಒತ್ತಡ ಹಾಕಿ ಪ್ರವೇಶ ಪತ್ರ ಪಡೆಯಲು ಯಶಸ್ವಿಯಾಗಿದ್ದರು.

### ಸಮಸ್ಯೆ ಜಟಿಲ-ವಿದ್ಯಾರ್ಥಿಗಳಿಗೆ ತಾಳ್ಮೆ ಮುಖ್ಯ

ಸರ್ಕಾರಿ ಕಾನೂನು ಕಾಲೇಜು ಪ್ರಾಂಶುಪಾಲರಾದ ಶೀನಾ ಥಾಮಸ್ ಅವರು ಮಾತನಾಡಿ, 2022-23ನೇ ಸಾಲಿನಲ್ಲಿ ಹೆಚ್ಚುವರಿ ವಿಭಾಗ ಎಂದು ಹುಬ್ಬಳ್ಳಿ ವಿಶ್ವ ವಿದ್ಯಾಲಯದಿಂದ ಮಾನ್ಯತೆ ದೊರೆತ ನಂತರ ದಾಖಲಾತಿ ಮಾಡಿಕೊಳ್ಳಲಾಗಿತ್ತು. ಆ ನಂತರ ಬಾರ್ ಕೌನ್ಸಿಲ್ ಆಫ್ ಇಂಡಿಯಾಗೆ ಶುಲ್ಕ ಪಾವತಿಸಿ ಮನವಿ ಮಾಡಲಾಯಿತು. ಕಾಲೇಜು ಸ್ಥಿತಿಗತಿ ಪರಿಶೀಲನೆಯನ್ನು ಆನ್ ಲೈನ್‌ನಲ್ಲಿ ಮಾಡಿದ ನಂತರ ಪರೀಕ್ಷೆ ಬರೆಯಲು ಅವಕಾಶ ಮಾಡಿಕೊಡಲಾಯಿತು. ಇದುವರೆಗೆ ಪರೀಕ್ಷಾ ಸಮಯದಲ್ಲಿ ವಿಶ್ವ ವಿದ್ಯಾಲಯಕ್ಕೆ ಪತ್ರ ಬರೆದು ವಿದ್ಯಾರ್ಥಿಗಳ ಪ್ರವೇಶ ಪತ್ರ ತರಿಸಿ ಪರೀಕ್ಷೆ ಬರೆಯಲು ಅವಕಾಶ ಮಾಡಿಕೊಡುತ್ತಿದ್ದೇವೆಂದರು.

ಹೆಚ್ಚುವರಿ ವಿದ್ಯಾರ್ಥಿಗಳಿಗೆ ಮಾನ್ಯತೆ ಕಲ್ಪಿಸುವಂತೆ ಮಾಜಿ ಪ್ರಧಾನಿ ದೇವೇಗೌಡರು ಹಾಗು ಕೇಂದ್ರ ಸಚಿವ ಹೆಚ್.ಡಿ.ಕುಮಾರಸ್ವಾಮಿ ಅವರ ಬಳಿ ಮನವಿ ಮಾಡಿದ್ದೇವೆ. ಕೊನೆಯ ಸೆಮಿಸ್ಟರ್ ಪರೀಕ್ಷೆ ಬರೆಯುವ ಸಮಯದಲ್ಲಿ ಒಂದು ತಿಂಗಳೊಳಗೆ ಈ ಸಮಸ್ಯೆಯನ್ನು ಶಾಶ್ವತವಾಗಿ ಬಗೆಹರಿಸಲು ಮುಂದಾಗುವುದಾಗಿ ತಿಳಿಸಿದ್ದರು. ಈ ಕೆಲಸ ಒಂದು ತಿಂಗಳೊಳಗೆ ಮುಗಿಯುವಂತಹದಲ್ಲ. ಬಿಸಿಐ ನಮ್ಮ ಮನವಿಯನ್ನು ಸ್ವೀಕರಿಸಿ ಹಲವಾರು ಪ್ರಕ್ರಿಯೆಗಳನ್ನು ಕೈಗೊಳ್ಳಬೇಕಾಗುತ್ತದೆ. ಈ ವರದಿಯನ್ನು ಲೀಗಲ್ ಎಜುಕೇಶನ್ ಸಮಿತಿ ಮುಂದೆ ಮಂಡಿಸಿ ಅಲ್ಲಿಂದ ವರದಿ ಬರುವವರೆಗೂ ಕಾಯಬೇಕಾಗುತ್ತದೆ. ಸಮಸ್ಯೆ ಜಟಿಲವಾಗಿರುವುದರಿಂದ ವಿದ್ಯಾರ್ಥಿಗಳು ತಾಳ್ಮೆ ವಹಿಸಬೇಕು. ಈ ಸಮಯದಲ್ಲಿ ಪರೀಕ್ಷಾ ಫಲಿತಾಂಶ ಪ್ರಕಟವಾಗಿಲ್ಲ ಎಂಬುದನ್ನು ಬಿಟ್ಟರೆ ಬೇರೆ ಯಾವ ತೊಂದರೆಯಾಗಿಲ್ಲ ಎಂದರು.

**ಖಾಸಗಿ ಕಾಲೇಜುಗಳಿಗೆ ಮಾನ್ಯತೆ**

ಕೆಲ ದಿನಗಳ ಹಿಂದೆಯಷ್ಟೇ ಕಾನೂನು

» ಎರಡನೇ ಪುಟದಲ್ಲಿ




ಪ್ರಜೋದಯ ದಿನಪತ್ರಿಕೆ, ಸಂಪಾದಕ, ಪ್ರಕಾಶಕ ಮತ್ತು ಮುದ್ರಕರು, ಜೆ.ಆರ್.ಕೆಂಚೇಗೌಡ, ಗಂಧದ ಕೋಠಿ ಹಿಂಭಾಗ, ಕೆ.ಆರ್.ಪುರಂ.ಹಾಸನ. ದೂರವಾಣಿ : 08172-231188, ಮೊ: 9449203019